ತಡೆಗೋಡೆ ಕಟ್ಟುವುದು

986(2022); ಶ್ರೀ ಕೋಳಿವಾಡ ಕೆ.ಬಿ. (ರಾಣೇಬೆನ್ನೂರು)

1) ರಾಣೇಬೆನ್ನೂರು ತಾಲ್ಲೂಕಿನ ಹರನಗಿರಿ ಗ್ರಾಮದಲ್ಲಿ ತುಂಗಭದ್ರಾ ನದಿಯಿಂದ ಉಂಟಾಗುತ್ತಿರುವ ತೊಂದರೆ ತಪ್ಪಿಸಲು ಹೊಳೆ ದಂಡೆಯಲ್ಲಿ ತಡೆಗೋಡೆ ಕಟ್ಟುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

2) ಬಂದಿದ್ದಲ್ಲಿ, ಸರ್ಕಾರದಿಂದ ಯಾವ ಕ್ರಮಕೈಗೊಳ್ಳಲಾಗಿದೆ (ಸಂಪೂರ್ಣ ವಿವರ ನೀಡುವುದು)?

ಶ್ರೀ M.B. ಪಾಟೀಲ (ಮಾನ್ಯ ಜಲಸಂಪನ್ಮೂಲ ಸಚಿವರು)

1) **ಮತ್ತು** 2) ರಾಣೇಬೆನ್ನೂರು ತಾಲೂಕಿನ ಹರನಗಿರಿ ಗ್ರಾಮದಲ್ಲಿ ತುಂಗಭದ್ರಾ ನದಿಯಿಂದ ಉಂಟಾಗುತ್ತಿರುವ ತೊಂದರೆ ತಪ್ಪಿಸಲು ಹೊಳೆ ದಂಡೆಯಲ್ಲಿ ತಡೆಗೋಡೆ ಕಟ್ಟುವ ಕುರಿತು ಮನವಿ ಬಂದಿದ್ದು. ಮನವಿಯು ನಿಗಮದ ಹಂತದಲ್ಲಿ ಪರಿಶೀಲನೆಯಲ್ಲಿದೆ.

ಮಲಘಟ್ಟ ಕೆರೆಯ ಟೆಂಡರ್‌ನಿಂದ ಆಗಿರುವ ನಷ್ಟ

991(982); ಶ್ರೀ ಕೃಷ್ಣಪ್ಪ ಎಂ.ಟಿ (ತುರವೇಕೆರೆ)

ಅ) ತುರುವೇಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮಲ್ಲಾಘಟ್ಟ ಕೆರೆಯ ಮೀನುಗಾರಿಕೆಗೆ ಟೆಂಡರ್ ಆಗಿದ್ದು, ಟೆಂಡರ್‌ದಾರರು ಸಭ್‌ಲೀಜ್ ನೀಡಿ, ಸರ್ಕಾರಕ್ಕೆ ಲಕ್ಷಾಂತರ ರೂಪಾಯಿ ಹಣವನ್ನು ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸಭ್‌ಲೀಜ್ ನೀಡಿರುವ ಗುತ್ತಿಗೆದಾರರ ಗುತ್ತಿಗೆಯನ್ನು ರದ್ದುಪಡಿಸಲು ಇಲಾಖೆಯ ನಿಯಮಾವಳಿಯಲ್ಲಿ ಅವಕಾಶ ಕಲ್ಪಿಸಲಾಗಿದ್ದರೂ ಸಹ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು;